# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 303 |
| ಸದಸ್ಯರ ಹೆಸರು | : | ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 07-07-2023 |
| ಉತ್ತರಿಸುವವರು | : | ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ರಾಜ್ಯದ ಅಂಗನವಾಡಿ ಕೇಂದ್ರಗಳಲ್ಲಿ ಅಂಗನವಾಡಿ ಕಾರ್ಯಕರ್ತೆಯರಾಗಿ ಕಾರ್ಯನಿರ್ವಹಿಸುತ್ತಿರುವವರ ಸಂಖ್ಯೆ ಎಷ್ಟು ಹಾಗೂ ಇವರಿಗೆ ನೀಡುತ್ತಿರುವ ವೇತನ ಎಷ್ಟು; | ರಾಜ್ಯದ ಅಂಗನವಾಡಿ ಕೇಂದ್ರಗಳಲ್ಲಿ **ಒಟ್ಟು 65657** ಸಿಬ್ಬಂದಿಗಳು ಅಂಗನವಾಡಿ ಕಾರ್ಯಕರ್ತೆಯರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ.<br><br>ಅಂಗನವಾಡಿ ಕಾರ್ಯಕರ್ತೆ, ಅಂಗನವಾಡಿ ಸಹಾಯಕಿ ಹಾಗೂ ಮಿನಿ ಅಂಗನವಾಡಿ ಕಾರ್ಯಕರ್ತೆಯರಿಗೆ ಈ ಕೆಳಕಂಡಂತೆ ಮಾಸಿಕ ಗೌರವಧನವನ್ನು ಪಾವತಿಸಲಾಗುತ್ತಿದೆ. |

| ವಿವರ | ವಿಂಗಡನೆ | ಕೇಂದ್ರ ಸರ್ಕಾರವು ನಿಗದಿಪಡಿಸಿರುವ ಗೌರವಧನ | ರಾಜ್ಯ ಸರ್ಕಾರದಿಂದ ಹೆಚ್ಚುವರಿಯಾಗಿ ನೀಡುತ್ತಿರುವ ಗೌರವಧನ | ಒಟ್ಟು |
|---|---|---|---|---|
| **ಅಂಗನವಾಡಿ ಕಾರ್ಯಕರ್ತೆ** | 10 ವರ್ಷಕ್ಕಿಂತ ಕಡಿಮೆ ವರ್ಷ ಸೇವೆ ಸಲ್ಲಿಸಿದವರಿಗೆ | 4500 | 6500 | 11000 |
| | 10 ರಿಂದ 20 ವರ್ಷ ಸೇವೆ ಸಲ್ಲಿಸಿದವರಿಗೆ | | 6750 | 11250 |
| | 20 ಕ್ಕಿಂತ ಹೆಚ್ಚು ಸೇವೆ ಸಲ್ಲಿಸಿದವರಿಗೆ | | 7000 | 11500 |
| **ಅಂಗನವಾಡಿ ಸಹಾಯಕಿ** | 10 ವರ್ಷಕ್ಕಿಂತ ಕಡಿಮೆ ವರ್ಷ ಸೇವೆ ಸಲ್ಲಿಸಿದವರಿಗೆ | 2500 | 3750 | 6250 |
| | 10 ರಿಂದ 20 ವರ್ಷ ಸೇವೆ ಸಲ್ಲಿಸಿದವರಿಗೆ | | 4000 | 6500 |
| | 20 ಕ್ಕಿಂತ ಹೆಚ್ಚು ಸೇವೆ ಸಲ್ಲಿಸಿದವರಿಗೆ | | 4250 | 6750 |
| **ಮಿನಿ ಅಂಗನವಾಡಿ ಕಾರ್ಯಕರ್ತೆ** | 10 ವರ್ಷಕ್ಕಿಂತ ಕಡಿಮೆ ವರ್ಷ ಸೇವೆ ಸಲ್ಲಿಸಿದವರಿಗೆ | 3500 | 3750 | 7250 |
| | 10 ರಿಂದ 20 ವರ್ಷ ಸೇವೆ ಸಲ್ಲಿಸಿದವರಿಗೆ | | 4000 | 7500 |
| | 20 ಕ್ಕಿಂತ ಹೆಚ್ಚು ಸೇವೆ ಸಲ್ಲಿಸಿದವರಿಗೆ | | 4250 | 7750 |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಆ. | ಅಂಗನವಾಡಿ ಕಾರ್ಯಕರ್ತೆಯರಿಗೆ ನೀಡುತ್ತಿರುವ ವೇತನವು ಕಡಿಮೆಯಾಗಿರುವುದರಿಂದ ಸರ್ಕಾರ ಈ ವೇತನವನ್ನು ಹೆಚ್ಚಳ ಮಾಡಲು ಯಾವ ಕ್ರಮವನ್ನು ಕೈಗೊಂಡಿದೆ; | ಸಮಗ್ರ ಶಿಶು ಅಭಿವೃದ್ಧಿ ಯೋಜನೆಯು ಕೇಂದ್ರ ಸರ್ಕಾರದ ಪ್ರಾಯೋಜಿತ ಕಾರ್ಯಕ್ರಮವಾಗಿದ್ದು ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರ ಸೇವೆಯು ಗೌರವಧನ ಆಧಾರಿತ ಸೇವೆಯಾಗಿರುತ್ತದೆ. ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಶೇ.60:40ರ ಅನುಪಾತದಲ್ಲಿ ಗೌರವಧನವನ್ನು ಪಾವತಿಸಲಾಗುತ್ತಿದೆ. |

| | | |
|---|---|---|
| | | 2022-23ನೇ ಸಾಲಿನಲ್ಲಿ ಆಯವ್ಯಯ ಭಾಷಣದಲ್ಲಿ ಘೋಷಿಸಿದಂತೆ ಅಂಗನವಾಡಿ ಕಾರ್ಯಕರ್ತೆ ಮತ್ತು ಮಿನಿ ಅಂಗನವಾಡಿ ಕಾರ್ಯಕರ್ತೆಯರ ಸೇವಾ ಹಿರಿತನದ ಮೇಲೆ 20 ವರ್ಷಕ್ಕಿಂತ ಹೆಚ್ಚು ಸೇವೆ ಸಲ್ಲಿಸಿದವರಿಗೆ ರೂ.1,500/-, 10-20 ವರ್ಷ ಸೇವೆ ಸಲ್ಲಿಸಿದವರಿಗೆ ರೂ.1,250/- ಮತ್ತು 10 ವರ್ಷಕ್ಕಿಂತ ಕಡಿಮೆ ಸೇವೆ ಸಲ್ಲಿಸಿದವರಿಗೆ ರೂ.1,000/-ಗಳ ಗೌರವಧನವನ್ನು ಹೆಚ್ಚಿಸಿ ಪಾವತಿಸಲಾಗುತ್ತಿದೆ.<br><br>ಇದಲ್ಲದೇ, ಫೆಬ್ರುವರಿ ಮಾಹೆಯಲ್ಲಿ ಮಂಡಿಸಲಾದ 2023-24ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ(96)ರಲ್ಲಿ ಅಂಗನವಾಡಿ ಕಾರ್ಯಕರ್ತೆ, ಸಹಾಯಕಿ, ಮಿನಿ ಅಂಗನವಾಡಿ ಕಾರ್ಯಕರ್ತೆಯರಿಗೆ ರೂ.1000/- ಗೌರವಧನ ಹೆಚ್ಚಿಸಲು ಘೋಷಿಸಲಾಗಿದೆ. |
| (ಇ) | ಅಂಗನವಾಡಿ ಕೇಂದ್ರಗಳಲ್ಲಿ ಮಕ್ಕಳಿಗೆ ನೀಡುತ್ತಿರುವ ಆಹಾರ ಪದಾರ್ಥಗಳು ಗುಣಮಟ್ಟದಿಂದ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದ್ದಲ್ಲಿ, ಉತ್ತಮ ಗುಣಮಟ್ಟವುಳ್ಳ ಕಂಪನಿಯ ಆಹಾರ ಪದಾರ್ಥಗಳನ್ನು ಮಕ್ಕಳಿಗೆ ನೀಡಲು ಸರ್ಕಾರ ಯಾವ ಕ್ರಮವನ್ನು ಕೈಗೊಂಡಿದೆ? | ಅಂಗನವಾಡಿ ಕೇಂದ್ರಗಳ ಮಕ್ಕಳಿಗೆ ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ ಗುಣಮಟ್ಟದ ಪೂರಕ ಪೌಷ್ಠಿಕ ಆಹಾರವನ್ನು ಒದಗಿಸಲಾಗುತ್ತಿದೆ. ಅಂಗನವಾಡಿ ಕೇಂದ್ರಗಳಿಗೆ ಒದಗಿಸುತ್ತಿರುವ ಆಹಾರ ಪದಾರ್ಥಗಳು ಉತ್ತಮ ಗುಣಮಟ್ಟದಿಂದ ಕೂಡಿರುವ ಬಗ್ಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಪ್ರಯೋಗಾಲಯಗಳಲ್ಲಿ ವಿಶ್ಲೇಷಣೆಗೆ ಒಳಪಡಿಸಿ ಗುಣಮಟ್ಟವನ್ನು ಖಚಿತಪಡಿಸಿಕೊಳ್ಳಲಾಗುತ್ತಿದೆ.<br><br>ಅಂಗನವಾಡಿ ಕೇಂದ್ರಗಳ ಮಕ್ಕಳಿಗೆ ಗುಣಮಟ್ಟದ ಆಹಾರ ಪದಾರ್ಥಗಳನ್ನು ನೀಡಲು ಸರ್ಕಾರವು ಈ ಕೆಳಕಂಡ ಕ್ರಮಗಳನ್ನು ಕೈಗೊಂಡಿದೆ.<br><br>1. ಅಂಗನವಾಡಿ ಕೇಂದ್ರಗಳಿಗೆ ಆಹಾರ ಪೂರೈಕೆ ಮೇಲ್ವಿಚಾರಣೆ ಮಾಡಲು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಲಾಗಿರುತ್ತದೆ.<br>2. ಗುಣಮಟ್ಟದ ಆಹಾರ ಪದಾರ್ಥಗಳನ್ನು ಸರಬರಾಜು ಮಾಡುತ್ತಿರುವ ಬಗ್ಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಪ್ರಯೋಗಾಲಯಗಳಲ್ಲಿ ವಿಶ್ಲೇಷಣೆಗೆ ಒಳಪಡಿಸಿ ವರದಿಯನ್ನು ಪಡೆಯಲಾಗುತ್ತಿದೆ.<br>3. ಅಂಗನವಾಡಿ ಕೇಂದ್ರಗಳಿಗೆ ಸರಿಯಾದ ಪ್ರಮಾಣದಲ್ಲಿ ಮತ್ತು ಗುಣಮಟ್ಟದ ಆಹಾರ ಪದಾರ್ಥಗಳನ್ನು ಸ್ವೀಕರಿಸಿದ ಬಗ್ಗೆ ಬಾಲವಿಕಾಸ ಸಮಿತಿಯ ಸದಸ್ಯರುಗಳಿಂದ ಮೇಲ್ವಿಚಾರಣೆ ಮಾಡಲಾಗುತ್ತಿದೆ.<br>4. ಗುಣಮಟ್ಟದ ಆಹಾರ ಪದಾರ್ಥಗಳನ್ನು ಸಮರ್ಪಕವಾಗಿ ಸರಬರಾಜು ಮಾಡದೇ ಇರುವ ಎಂ.ಎಸ್.ಪಿ.ಟಿ.ಸಿ. ಗಳ ಮೇಲೆಯೂ ಸಹ ಕ್ರಮ ಕೈಗೊಳ್ಳಲಾಗುತ್ತಿದೆ.<br><br>5. ಅಂಗನವಾಡಿ ಕೇಂದ್ರಗಳಿಗೆ ಸರಬರಾಜು ಮಾಡಿರುವ ಆಹಾರ ಪದಾರ್ಥಗಳನ್ನು ಕಾಳಸಂತೆಯಲ್ಲಿ ಮಾರಾಟವಾಗುವುದನ್ನು ತಪ್ಪಿಸಲು ಅಂಗನವಾಡಿ ಕೇಂದ್ರಗಳಿಗೆ ಆಹಾರ ಸರಬರಾಜು ಮಾಡುವ Route Map (ಮಾರ್ಗನಕ್ಷೆ) ಬಗ್ಗೆ ಸೂಚನೆಗಳನ್ನು ನೀಡಲಾಗಿದೆ. ಸಾಗಾಣಿಕೆ ವಾಹನದಲ್ಲಿ Route Map (ಮಾರ್ಗನಕ್ಷೆ) ಅನ್ನು ಪ್ರದರ್ಶಿಸಲು ಮತ್ತು ಬಾಲವಿಕಾಸ ಸಮಿತಿ ಸದಸ್ಯರುಗಳಿಗೆ ಸಲ್ಲಿಸಲು ಸೂಚಿಸಲಾಗಿದೆ. |

| | | |
|---|---|---|
| | | 6. ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಜಿಲ್ಲಾ ನಿರೂಪಣಾಧಿಕಾರಿಗಳು ಮತ್ತು ಉಪ ನಿರ್ದೇಶಕರುಗಳು ಪೂರಕ ಪೌಷ್ಠಿಕ ಆಹಾರ ಕಾರ್ಯಕ್ರಮದ ಸಮರ್ಪಕ ಅನುಷ್ಠಾನಕ್ಕಾಗಿ ತೆಗೆದುಕೊಳ್ಳಬಹುದಾದ ಕ್ರಮಗಳ ಬಗ್ಗೆ ಸೂಚನೆ ನೀಡಲಾಗಿದೆ. |

**ಸಂಖ್ಯೆ: ಮಮಇ 120 ಐಸಿಡಿ 2023**

**(ಲಕ್ಷ್ಮೀ ಆರ್. ಹೆಬ್ಬಾಳಕರ್)**
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ
ವಿಕಲಚೇತನರ ಹಾಗೂ ಹಿರಿಯ ನಾಗರೀಕರ
ಸಬಲೀಕರಣ ಸಚಿವರು